**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**ಸಿ.ಸಿ.ನಂ.123/2021**

ದಿನಾಂಕಃ **29-12-2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು ಃ | ಹರೀಶ್ ಆರ್. | ಚಾಸಾ-10, ಪ್ರಾಸ-04 |
| ಗಂಡನ ಹೆಸರು ಃ | ರಾಮಾನಾಯ್ಕ | |
| ವಯಸ್ಸು ಃ | 37 ವರ್ಷ | |
| ಉದ್ಯೋಗ ಃ | ಉಪ ನಿರೀಕ್ಷಕರು | |
| ವಾಸ ಃ | ಗಂಗೊಳ್ಳಿ, ಉಡುಪಿ ಜಿಲ್ಲೆ | |

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ನಾನು 25.08.2020 ರಿಂದ 05.05.2022 ವರೆಗೆ ಸಖರಾಯಪಟ್ಟಣ ಠಾಣೆಯಲ್ಲಿ ಆರಕ್ಷಕ ಉಪ ನೀರಿಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ28.08.2021 ರಂದು ಈ ಪ್ರಕರಣ ಕಡತವನ್ನು ಚಾಸಾ-1 ರವರಿಂದ ಪಡೆದುಕೊಂಡು ಪರಿಶೀಲಿಸಿರುತ್ತೇನೆ. ಈಗಾಗಲೇ ಪ್ರಕರಣದಲ್ಲಿ ರಾಸಾಯನಿಕ ಪರೀಕ್ಷಾ ವರದಿ ಬರಲು ಬಾಕಿ ಇದ್ದು, ದಿನಾಂಕಃ 04.11.2021 ರಂದು ಚಾಸಾ-8 ರವರಿಂದ ರಾಸಾಯನಿಕ ಪರೀಕ್ಷಾ ವರದಿಯನ್ನು ಸ್ವೀಕರಿಸಿಕೊಂಡು ಪ್ರಕರಣದ ತನಿಖೆಯಲ್ಲಿ ಕಲಂ 38, ಕೆಇ ಆ್ಯಕ್ಟ್, ಕಲಂ 328, 269, 270 ಐಪಿಸಿ ಮತ್ತು ಕಲಂ 5(1)(2) ಕರ್ನಾಟಕ ಎಪಿಡೆಮಿಕ್ ಡೀಸಸ್ ಆ್ಯಕ್ಟ್ ಅಡಿ ಅಪರಾಧಗಳು ತನಿಖೆಯಿಂದ ಸಾಬೀತಾಗಾಗದ ಕಾರಣ ಉಳಿದ ಕಲಂಗಳಾದ ಕರ್ನಾಟಕ ಅಬಕಾರಿ ಕಾಯ್ದೆ ಅಡಿ 13(1)(ಎ), 15, 32(1) ರಂತೆ ಆರೋಪಿಯು ಅಪರಾಧ ಮಾಡಿರುವುದು ಕಂಡು ಬಂದಿದ್ದರಿಂದ ಆರೋಪಿಯ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ತಯಾರಿಸಿ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಸಾಕ್ಷಿಯು ರಾಸಾಯನಿಕ ವಿಶ್ಲೇಷಣಾ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದೂ, ಸಾಕ್ಷಿಯು ನಿಪಿ-6 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

ಪಾಟೀಸವಾಲುಃ ಆರೋಪಿತರ ಪರ ಶ್ರೀ.ಎ.ಎಂ.ಎಸ್., ವಕೀಲರಿಂದಃ

ನಾನು ಯಾವುದೇ ರಾಸಾಯನಿಕ ವಿಶ್ಲೇಷಣಾ ವರದಿಯನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ. ಠಾಣಾ ಅಂಕಿ ಅಂಶದ ಸಲುವಾಗಿ ಆರೋಪಿಯ ವಿರುದ್ಧ ದಾಖಲಿಸಿದ ಸುಳ್ಳು ಪ್ರಥಮ ವರ್ತಮಾನ ವರದಿಯನ್ನು ಸಮರ್ಥಿಸುವ ಸಲುವಾಗಿ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಮುದ್ದೆ ಮಾಲಿಗೂ ಆರೋಪಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.